# ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ,
# 6 & 7ನೇ ಮಹಡಿ, ಕಂದಾಯ ಭವನ, ಕೆ.ಜಿ.ರಸ್ತೆ, ಬೆಂಗಳೂರು–560 009

## ಅಧಿಸೂಚನೆ

**No. KSAT/EST(1)/RCT-STN/02/2023 DATED 06.01.2023**

1) ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿಯ, ಬೆಂಗಳೂರು, ಬೆಳಗಾವಿ ಮತ್ತು ಕಲಬುರಗಿ ಪೀಠಗಳಲ್ಲಿ ಪ್ರಸ್ತುತ ಖಾಲಿ ಇರುವ **ಉಳಿದ ಮೂಲ ವೃಂದದ** ಶೀಘ್ರಲಿಪಿಗಾರ ಹುದ್ದೆಗಳನ್ನು ಕರ್ನಾಟಕ ಆಡಳಿತ ನ್ಯಾಯಮಂಡಳಿ (ನೇಮಕಾತಿ) ನಿಯಮಗಳು, 1993 ಹಾಗೂ ಅದರಡಿಯಲ್ಲಿ ಕಾಲಕಾಲಕ್ಕೆ ತಿದ್ದುಪಡಿ ಮಾಡಿರುವಂತೆ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ನಿಗದಿಪಡಿಸಿರುವ ನಮೂನೆಯಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ :–

2) ಹುದ್ದೆಗಳ ವಿವರ:–

(ಅ) ಹುದ್ದೆ ಹಾಗೂ ಸಂಖ್ಯೆ – ಶೀಘ್ರಲಿಪಿಗಾರರು – 7 ಹುದ್ದೆಗಳು

**ಹುದ್ದೆಗಳ ವರ್ಗೀಕರಣ**

**ಉಳಿದ ಮೂಲ ವೃಂದದ ಅಭ್ಯರ್ಥಿಗಳಿಗೆ ಮೀಸಲಿರಿಸಿರುವ ಹುದ್ದೆಗಳು**

| ಮೀಸಲಾತಿ ವಿವರ | ಇತರೆ | ಮಹಿಳೆ | ಗ್ರಾಮೀಣ | ಒಟ್ಟು |
|---|---|---|---|---|
| ಸಾಮಾನ್ಯ ಅರ್ಹತೆ | 1 | 1 | 1 | 3 |
| ಪರಿಶಿಷ್ಟ ಜಾತಿ | 1 | – | – | 1 |
| ಪರಿಶಿಷ್ಟ ಪಂಗಡ | 1 | – | – | 1 |
| ಪ್ರವರ್ಗ - I | 1 | – | – | 1 |
| ಪ್ರವರ್ಗ - II ಎ | 1 | – | – | 1 |
| | | | ಒಟ್ಟು ಹುದ್ದೆಗಳು | 7 |

**ವಿಶೇಷ ಸೂಚನೆ: ಶೀಘ್ರಲಿಪಿಕಾರರ ಹುದ್ದೆಗೆ ಅಂತಿಮವಾಗಿ ಆಯ್ಕೆಯಾದ ಅಭ್ಯರ್ಥಿಗಳನ್ನು ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿಯ ಬೆಂಗಳೂರಿನ ಪ್ರಧಾನ ಪೀಠದಲ್ಲಾಗಲೀ, ಬೆಳಗಾವಿ ಅಥವಾ ಕಲಬುರಗಿ ಪೀಠಗಳಲ್ಲಾಗಲಿ ನಿಯೋಜಿಸಬಹುದಾಗಿರುತ್ತದೆ ಮತ್ತು ಅಭ್ಯರ್ಥಿಗಳು ಮೂರೂ ಪೀಠಗಳಲ್ಲಿ ಕಾರ್ಯನಿರ್ವಹಿಸಲು ಸಿದ್ಧರಿರಬೇಕು.**

3) **ವೇತನ ಶ್ರೇಣಿ:** ರೂ. 30350–750–32600–850–36000–950–39800–1100–46400–1250–53900–1450–58250.

4) **ಶೈಕ್ಷಣಿಕ ವಿದ್ಯಾರ್ಹತೆ :**
ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಗಳು ಕೆಳಕಂಡ ವಿದ್ಯಾರ್ಹತೆಯನ್ನು ಹೊಂದಿರಬೇಕು ಹಾಗೂ ಅರ್ಜಿಯ ನಿಗದಿತ ಅಂಕಣದಲ್ಲಿ ಸ್ಪಷ್ಟವಾಗಿ ನಮೂದಿಸಿರಬೇಕು ಹಾಗೂ ಅವುಗಳ ಒಂದೊಂದು ಛಾಯಾ (ಫೋಟೋ) ಪ್ರತಿಯನ್ನು ಅರ್ಜಿಯೊಂದಿಗೆ ಲಗತ್ತಿಸಬೇಕು.
1. ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯಲ್ಲಿ ತೇರ್ಗಡೆಯಾಗಿರಬೇಕು.
2. ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯವರು ನಡೆಸುವ ಕನ್ನಡ ಮತ್ತು ಆಂಗ್ಲ ಭಾಷೆಯ ಬೆರಳಚ್ಚು *ಪರೀಕ್ಷೆ ಪ್ರೌಢದರ್ಜೆ (ಸೀನಿಯರ್ ಗ್ರೇಡ್) ಹಾಗೂ ಆಂಗ್ಲ* ಮತ್ತು ಕನ್ನಡ ಭಾಷೆಯ ಶೀಘ್ರಲಿಪಿ ಪ್ರೌಢದರ್ಜೆ (ಸೀನಿಯರ್ ಗ್ರೇಡ್) ಅಥವಾ ತತ್ಸಮಾನ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಿರಬೇಕು.

5) **ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ:** 31.01.2023 **ಆಗಿರುತ್ತದೆ. ನಿಗದಿತ ದಿನಾಂಕದ ನಂತರ ಬಂದ ಅರ್ಜಿಗಳನ್ನು ನೇರವಾಗಿ ತಿರಸ್ಕರಿಸಲಾಗುವುದು.**

6) **ಸೂಚನೆ :–**

i. ಅಭ್ಯರ್ಥಿಗಳು ಅರ್ಜಿ ನಮೂನೆಯನ್ನು ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿಯ ಅಧಿಕೃತ ಜಾಲತಾಣ **www.ksat.karnataka.gov.in** ನಿಂದ **ಉಳಿದ ಮೂಲ ವೃಂದಕ್ಕೆ ನಿಗದಿಪಡಿಸಿರುವ ಅರ್ಜಿಯನ್ನು ಮಾತ್ರವೇ** ಡೌನ್‌ಲೋಡ್ ಮಾಡಿಕೊಂಡು, ಭರ್ತಿ ಮಾಡಿದ ಅರ್ಜಿಯೊಂದಿಗೆ ಅಗತ್ಯ ದಾಖಲೆಗಳ ಪ್ರತಿಗಳನ್ನು ಲಗತ್ತಿಸಿ ಸಲ್ಲಿಸತಕ್ಕದ್ದು. ಮಂಡಳಿಯು ನಿಗದಿಪಡಿಸಿರುವ, ನಮೂನೆಯಲ್ಲಿಯೇ ಅರ್ಜಿ ಸಲ್ಲಿಸಬೇಕು. ಇತರೆ ಯಾವುದೇ ನಮೂನೆಯಲ್ಲಾಗಲೀ ಅಥವಾ ಬೆರಳಚ್ಚು/ಛಾಯಾ (ಜೆರಾಕ್ಸ್) ಪ್ರತಿಯಲ್ಲಿ ಸಲ್ಲಿಸಲ್ಪಡುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ii. ಭರ್ತಿ ಮಾಡಿದ ಅರ್ಜಿಗಳನ್ನು, ವಿಲೇಖನಾಧಿಕಾರಿಗಳು, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, 7ನೇ ಮಹಡಿ, ಕೆಂಪೇಗೌಡ ರಸ್ತೆ, ಬೆಂಗಳೂರು–560 009, ಇವರಿಗೆ ಅಂಚೆ ಮೂಲಕ ಅಥವಾ ಖುದ್ದಾಗಿ ಸಲ್ಲಿಸಬಹುದು.

iii. ಅರ್ಜಿ ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕ ಮತ್ತು ನಿಗದಿತ ಸಮಯದ ನಂತರ ಬರುವ ಅರ್ಜಿಗಳನ್ನು ನೇರವಾಗಿ ತಿರಸ್ಕರಿಸಲಾಗುವುದು.

7) **ನಿಗದಿತ ಶುಲ್ಕ:– ಶುಲ್ಕ ಪಾವತಿ ಮಾಡುವ ವಿವರ**

ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1 ಮತ್ತು ಅಂಗವಿಕಲ ಅಭ್ಯರ್ಥಿಗಳಿಗೆ ಅರ್ಜಿ ಶುಲ್ಕ ವಿನಾಯಿತಿಸಿದೆ. ಇತರೆ ಪ್ರವರ್ಗದ ಅಭ್ಯರ್ಥಿಗಳು ಅರ್ಜಿ ಶುಲ್ಕ ರೂ.150/– ಗಳನ್ನು (ಒಂದುನೂರ ಐವತ್ತು ರೂಪಾಯಿ) ಐಪಿಒ/ಡಿಡಿ ಮೂಲಕ **Registrar, K.S.A.T., 7th Floor, Kandaya Bhavana, K.G.Road, Bengaluru** ಇವರ ಪದನಾಮಕ್ಕೆ ಬೆಂಗಳೂರಿನಲ್ಲಿ ಸಂದಾಯವಾಗುವಂತೆ **(payable at Bengaluru)** ಪಡೆದು, ಸದರಿ ಡಿಡಿ/ಐಪಿಒಗಳ ಮೂಲ ಪ್ರತಿಗಳನ್ನು ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು.

8) **ವಯೋಮಿತಿ:–**

ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು ಕನಿಷ್ಠ 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು ಮತ್ತು ಈ ಕೆಳಗಿನಂತೆ ವರ್ಗಾವಾರು ಗರಿಷ್ಠ ವಯೋಮಿತಿಯನ್ನು ಮೀರಿರಬಾರದು.

| | |
|---|---|
| ಸಾಮಾನ್ಯ ವರ್ಗ | 35 ವರ್ಷಗಳು |
| ಪ.ಜಾ/ಪ.ಪಂ/ಪ್ರ–1 | 40 ವರ್ಷಗಳು |
| 2ಎ, 2ಬಿ, 3ಎ, 3ಬಿ | 38 ವರ್ಷಗಳು |

9) **ಈ ಕೆಳಗಿನ ಸಂದರ್ಭಗಳಲ್ಲಿ ಹಾಗೂ ಕರ್ನಾಟಕ ನಾಗರಿಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977ರ ನಿಯಮ 6ರ ರಂತೆ ವಯೋಮಿತಿಯನ್ನು ಅದರಲ್ಲಿ ತಿಳಿಸಿರುವ ಮಟ್ಟಿಗೆ ಸಂಬಂಧಪಟ್ಟ ದಾಖಲೆ ಒದಗಿಸಿದಲ್ಲಿ/ಸಲ್ಲಿಸಿದಲ್ಲಿ ಹೆಚ್ಚಿಸಲಾಗುವುದು/ಸಡಿಲಿಸಲಾಗುವುದು**

(ಅ) ಅಭ್ಯರ್ಥಿಯು ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮದ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿದ್ದಲ್ಲಿ ಅಥವಾ ಹಿಂದೆ ಹೊಂದಿದ್ದಲ್ಲಿ ಗರಿಷ್ಠ ವಯೋಮಿತಿಯನ್ನು ಅವನು/ಅವಳು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸಿರುವರೋ

ಅಥವಾ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

(ಆ) ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ ಅವನು ಕೇಂದ್ರ ಸಶಸ್ತ್ರ ದಳದಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವನೋ ಅಷ್ಟು ವರ್ಷಗಳಿಗೆ ಮೂರು ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು. (ಈ ಉಪ ಕಂಡಿಕೆಗೆ ಸಂಬಂಧಿಸಿದ ವಿವರಣೆಗಳಿಗೆ ಕರ್ನಾಟಕ ನಾಗರಿಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು, 1977ರ ನಿಯಮ 2 ಮತ್ತು 9 ರನ್ವಯ ಅರ್ಥೈಸಿಕೊಳ್ಳುವುದು).

(ಇ) ಅಭ್ಯರ್ಥಿಗಳು ನ್ಯಾಷನಲ್ ಕೆಡೆಟ್ ಕಾರ್ಪ್ಸ್ (ಎನ್‌ಸಿಸಿ) ನಲ್ಲಿ ಪೂರ್ಣಕಾಲಿಕ ಪರಿವೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಯಾಗಿದ್ದರೆ ಅಂತಹ ಕೆಡೆಟ್ ಪರಿವೀಕ್ಷಕರಾಗಿ ಅವರು ಸೇವೆ ಸಲ್ಲಿಸಿದಷ್ಟು ವರ್ಷಗಳು.

(ಈ) ಅಭ್ಯರ್ಥಿಯು ರಾಜ್ಯ ಸರ್ಕಾರದಿಂದ ಪುರಸ್ಕೃತವಾದ <u>ಗ್ರಾಮೀಣ ಔದ್ಯಮೀಕರಣ ಯೋಜನೆಯ</u> ಮೇರೆಗೆ ನೇಮಕಗೊಂಡ ಗ್ರಾಮ ಸಮೂಹ ಪರಿಶೀಲಿಕನಾಗಿ ಪ್ರಸ್ತುತ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಪಕ್ಷದಲ್ಲಿ ಅವನು/ಅವಳು ಅಂತಹ ಗ್ರಾಮ ಪರಿಶೀಲಿಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು.

(ಉ) ಅಭ್ಯರ್ಥಿಯು ಅಂಗವಿಕಲನಾಗಿದ್ದರೆ 10 ವರ್ಷಗಳು.

(ಊ) ಅಭ್ಯರ್ಥಿಯು ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದರೆ ಅಥವಾ ಹಿಂದೆ ಹೊಂದಿದ್ದ ಪಕ್ಷದಲ್ಲಿ ಗರಿಷ್ಠ ವಯೋಮಿತಿಯನ್ನು ಅವನು/ಅವಳು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೋ ಅಥವಾ ಈ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳು ಅಥವಾ 5 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

(ಋ) ಅಭ್ಯರ್ಥಿಯು ವಿಧವೆಯಾಗಿದ್ದಲ್ಲಿ 10 ವರ್ಷಗಳು.

(ಎ) ಅಭ್ಯರ್ಥಿಯು ಜೀತ ಕಾರ್ಮಿಕನಾಗಿದ್ದ ಪಕ್ಷದಲ್ಲಿ 10 ವರ್ಷಗಳು.

ಉಪಕಂಡಿಕೆ 8(ಎ)ರ ಮೇರೆಗೆ ವಯೋಮಿತಿಯ ಸಡಿಲಿಕೆಯನ್ನು ಕೋರುವ ಅಭ್ಯರ್ಥಿಯು ಜೀತ ಕಾರ್ಮಿಕನಾಗಿದ್ದು, ಸದರಿ ಅಧಿನಿಯಮ ಅಥವಾ 1957ರ ಕರ್ನಾಟಕ ಜೀತ ಕಾರ್ಮಿಕ ಪದ್ಧತಿ ರದ್ದತಿ ನಿಯಮದ ಮೇರೆಗೆ ಜೀತ ಸಾಲವನ್ನು ಸಂದಾಯ ಮಾಡುವ ಹೊಣೆಯಿಂದ ಬಿಡುಗಡೆಯಾಗಿದ್ದಾನೆಂಬ ಬಗ್ಗೆ ಪ್ರಮಾಣ ಪತ್ರವನ್ನು ಜಿಲ್ಲಾ ಮ್ಯಾಜಿಸ್ಟ್ರೇಟ್‌ರಿಂದ ಪಡೆದು ಅರ್ಜಿಯೊಂದಿಗೆ ಲಗತ್ತಿಸಬೇಕು.

10) **<u>ಜಾತಿ/ಮೀಸಲಾತಿ ಪ್ರಮಾಣ ಪತ್ರಗಳು:</u>**

ಮೀಸಲಾತಿ ಕೋರಬಯಸುವ ಅಭ್ಯರ್ಥಿಗಳು ಈ ಕೆಳಗೆ ನಮೂದಿಸಿರುವ ನಮೂನೆಗಳಲ್ಲಿಯೇ ಮೀಸಲಾತಿ ಪ್ರಮಾಣ ಪತ್ರಗಳನ್ನು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು :–

- ಪ.ಜಾ/ಪ.ಪಂ. ಅಭ್ಯರ್ಥಿಗಳು ನಮೂನೆ 'ಡಿ' ಯಲ್ಲಿ
- ಪ್ರವರ್ಗ–1 ರ ಅಭ್ಯರ್ಥಿಗಳು ನಮೂನೆ 'ಇ' ಯಲ್ಲಿ ಹಾಗೂ
- 2ಎ, 2ಬಿ, 3ಎ, 3ಬಿ ಆಭ್ಯರ್ಥಿಗಳು ನಮೂನೆ 'ಎಫ್' ನಲ್ಲಿ

ಅರ್ಜಿ ಸಲ್ಲಿಸುವ ದಿನಾಂಕದಂದು ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರವನ್ನು ಸಂಬಂಧಿತ ತಹಶೀಲ್ದಾರ್‌ರವರಿಂದ ಅಂದರೆ ತಹಸೀಲ್ದಾರ್‌ರವರ ಸಹಿ ಮತ್ತು ಮೊಹರು ಅಥವಾ ಬಾರ್‌ಕೋಡ್, ಹಾಲೋಗ್ರಾಮ್ ಮತ್ತು ವಾಟರ್ ಮಾರ್ಕ್‌ನೊಂದಿಗೆ ಪಡೆದಿಟ್ಟುಕೊಂಡಿರತಕ್ಕದ್ದು. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ–1ರ ಮೀಸಲಾತಿ ಪ್ರಮಾಣ ಪತ್ರಗಳು ರದ್ದಾಗುವವರೆಗೂ ಚಾಲ್ತಿಯಲ್ಲಿರುವುದರಿಂದ, ಅರ್ಜಿ ಸಲ್ಲಿಸುವ ದಿನಾಂಕದೊಳಗೆ ನಿಗದಿತ ನಮೂನೆಯಲ್ಲಿ ಪಡೆದಿಟ್ಟುಕೊಂಡಿರತಕ್ಕದ್ದು. ಮತ್ತು ಅದರ ಒಂದು ಛಾಯಾ (ಫೋಟೋ) ಪ್ರತಿಯನ್ನು ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು. ಹಿಂದುಳಿದ ವರ್ಗಗಳ ಪ್ರವರ್ಗ–2ಎ, 2ಬಿ, 3ಎ ಮತ್ತು 3ಬಿ ವರ್ಗದ ಮೀಸಲಾತಿ ಪ್ರಮಾಣ ಪತ್ರಗಳು 5 ವರ್ಷ ಚಾಲ್ತಿಯಲ್ಲಿರುತ್ತವೆ. ಈ

ಅಭ್ಯರ್ಥಿಗಳು ಪಡೆದಿರುವ ಪ್ರಮಾಣ ಪತ್ರವು ಅರ್ಜಿ ಸಲ್ಲಿಸುವ ದಿನಾಂಕದಂದು ಚಾಲ್ತಿಯಲ್ಲಿರಬೇಕು ಮತ್ತು ಅದರ ಒಂದು (ಫೋಟೋ) ಪ್ರತಿಯನ್ನು ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಿ ಅವರ ಅಭ್ಯರ್ಥಿತನವನ್ನು ನಿಯಮಾನುಸಾರ ಸಾಮಾನ್ಯ ಅರ್ಹತೆ ಅಡಿಯಲ್ಲಿ ಪರಿಗಣಿಸಲಾಗುವುದು. ಈ ಪ್ರಮಾಣ ಪತ್ರಗಳ ನಮೂನೆಗಳನ್ನು ಅನುಬಂಧ–1 ರಲ್ಲಿ ತೋರಿಸಲಾಗಿದೆ.

11) <u>ಅರ್ಹತಾ ಷರತ್ತುಗಳು:–</u>

ಅ) ಭಾರತೀಯ ನಾಗರಿಕನಾಗಿರತಕ್ಕದ್ದು.

ಆ) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಅರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತವಾಗಿರಬೇಕು.

ಇ) ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ಅಭ್ಯರ್ಥಿತನವನ್ನು ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿಯು ಕಾಯ್ದಿರಿಸಿಕೊಂಡಿದೆ ಮತ್ತು ಸರ್ಕಾರದ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ.

ಈ) ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಜೀವಂತ ಹೆಂಡತಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ಸರ್ಕಾರದ ಪೂರ್ವಾನುಮತಿ ಇಲ್ಲದೆ ನೇಮಕಾತಿಗೆ ಅರ್ಹರಾಗುವುದಿಲ್ಲ.

ಉ) ನಿಗದಿತ ಶೈಕ್ಷಣಿಕ ಅರ್ಹತೆಯ ಜೊತೆಗೆ ಈ ಮೇಲ್ಕಂಡ ಅರ್ಹತೆಗಳನ್ನು ಹೊಂದಿರುವ ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿ ಸಲ್ಲಿಸಲು ಅರ್ಹತೆಯನ್ನು ಹೊಂದಿರುತ್ತಾರೆ.

12) <u>ಪ್ರಮುಖವಾದ ಸೂಚನೆಗಳು:</u>

1) ಹುದ್ದೆಗಳಿಗೆ ನಿಗದಿಪಡಿಸಲಾದ ವಿದ್ಯಾರ್ಹತೆಯ ಎಲ್ಲಾ ವರ್ಷಗಳ ಅಂಕಪಟ್ಟಿಗಳು ಹಾಗೂ ಪ್ರಮಾಣ ಪತ್ರಗಳು
2) ಜನ್ಮ ದಿನಾಂಕವನ್ನು ನಮೂದಿಸಿರುವ 10ನೇ ತರಗತಿ ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ / ವರ್ಗಾವಣೆ ಪತ್ರ/ಜನನ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತಭಾಗ.
3) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, ಪ್ರವರ್ಗ–2ಎ, ಪ್ರವರ್ಗ–2ಬಿ, ಪ್ರವರ್ಗ–3ಎ ಮತ್ತು ಪ್ರವರ್ಗ–3ಬಿಗಳ ಮೀಸಲಾತಿ ಪ್ರಮಾಣ ಪತ್ರಗಳು ಪ್ರಸ್ತುತ ಚಾಲ್ತಿಯಲ್ಲಿರುವ ಡಿ, ಇ, ಎಫ್ ನಮೂನೆಗಳಲ್ಲಿ (ಮೀಸಲಾತಿ ಕೋರಿದ್ದಲ್ಲಿ)
4) ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ–1 ಮತ್ತು 2 ರಲ್ಲಿ (ಮೀಸಲಾತಿ ಕೋರಿದ್ದಲ್ಲಿ)
5) ಅಂಗವಿಕಲ ಮೀಸಲಾತಿ ಅಭ್ಯರ್ಥಿಯ ಪ್ರಮಾಣ ಪತ್ರ (ಶುಲ್ಕ ವಿನಾಯಿತಿ ಕೋರಿದ್ದಲ್ಲಿ)
6) ವಿಧವೆಯಾದಲ್ಲಿ ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ.
7) ಜನಗಣತಿ ಕಾರ್ಯದಲ್ಲಿ ಕೆಲಸ ಮಾಡಿರುವ ಬಗ್ಗೆ ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ.
8) ಜೀತಮುಕ್ತಿಯ ಬಗ್ಗೆ ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ.
9) ಈ ಅಧಿಸೂಚನೆಯನ್ವಯ ನೇಮಕಾತಿಯಾಗಿ ಕಾರ್ಯನಿರ್ವಹಿಸುವ ನೌಕರರಿಗೆ ಎನ್‌ಪಿಎಸ್ ಪಿಂಚಣಿ ಸೌಲಭ್ಯ ಅನ್ವಯವಾಗುತ್ತದೆ.

(ಮೇಲಿನ ಕ್ರಮ ಸಂಖ್ಯೆ 3, 4 ಮತ್ತು 5ರ ಪ್ರಮಾಣ ಪತ್ರಗಳ ನಮೂನೆಗಳನ್ನು ಅರ್ಜಿಯೊಡನೆ ಲಗತ್ತಿಸಿದೆ)

13) <u>ಗ್ರಾಮೀಣ ಅಭ್ಯರ್ಥಿ :–</u>

ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ 1 ರಿಂದ 10ನೇ ತರಗತಿಯವರೆಗೆ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು. ಈ ಪ್ರಮಾಣ ಪತ್ರಗಳು ಅರ್ಜಿ ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಸಿಂಧುವಾಗಿರಬೇಕು ಮತ್ತು ಪರಿಶೀಲನೆಯ ಸಮಯದಲ್ಲಿ ಹಾಜರುಪಡಿಸತಕ್ಕದ್ದು. ಅದರ ಒಂದು ಛಾಯಾ ಪ್ರತಿಯನ್ನು ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು.

ಗ್ರಾಮೀಣ ಅಭ್ಯರ್ಥಿ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, ಪ್ರವರ್ಗ–2ಎ, 2ಬಿ, 3ಎ, 3ಬಿ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳು ನಮೂನೆ–2ರಲ್ಲಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಿಗದಿತ ಪ್ರಾಧಿಕಾರಿಗಳಿಂದ ಪಡೆದಿಟ್ಟು ಕೊಂಡಿರತಕ್ಕದ್ದು.

ಗ್ರಾಮೀಣ ಮೀಸಲಾತಿ ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ನಮೂನೆ–2ರ ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರದ ಜೊತೆಗೆ ನಮೂನೆ–1ರಲ್ಲಿ ಅವರು ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ತಹಶೀಲ್ದಾರ್‌ರವರಿಂದ ಪಡೆದಿರತಕ್ಕದ್ದು.

ಗ್ರಾಮೀಣ ಮೀಸಲಾತಿ ಕೋರುವ ಸಾಮಾನ್ಯ ವರ್ಗ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, ಪ್ರವರ್ಗ–2ಎ, 2ಬಿ, 3ಎ, 3ಬಿ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅವರು ಗ್ರಾಮೀಣ ಮೀಸಲಾತಿಗೆ ಅನರ್ಹರಾಗಿರುತ್ತಾರೆ.

**ಸೂಚನೆ: – ಗ್ರಾಮೀಣ ಮೀಸಲಾತಿಗೆ ಸಂಬಂಧಿಸಿದಂತೆ ನಮೂನೆ–2ರ ಪ್ರಮಾಣ ಪತ್ರವನ್ನು ಅಭ್ಯರ್ಥಿಗಳು ತಾವು ವ್ಯಾಸಂಗ ಮಾಡಿದ ಶಾಲೆಯ ಮುಖ್ಯೋಪಾಧ್ಯಾಯರಿಂದ ಪಡೆದು ಅದಕ್ಕೆ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಪಡೆದಿರತಕ್ಕದ್ದು. (ಮೇಲಿನ ನಮೂನೆ–1 ಮತ್ತು 2ರ ಪ್ರಮಾಣ ಪತ್ರಗಳ ನಮೂನೆಗಳನ್ನು ಅರ್ಜಿಯೊಡನೆ ಲಗತ್ತಿಸಿದೆ).**

14) **<u>ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿಯೊಡನೆ ಪತ್ರ ವ್ಯವಹಾರ:</u>**

ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿಯು ಅಭ್ಯರ್ಥಿಯ ವಿಚಾರದಲ್ಲಿ ಅಭ್ಯರ್ಥಿಗಳೊಂದಿಗೆ ಯಾವುದೇ ರೀತಿಯ ಪತ್ರ ವ್ಯವಹಾರವನ್ನು ನಡೆಸುವುದಿಲ್ಲ. ವಿಳಾಸ ಬದಲಾವಣೆ ಇದ್ದಲ್ಲಿ ಅಭ್ಯರ್ಥಿಗಳು ಲಿಖಿತ ಮನವಿಯ ಮೂಲಕ ಮಂಡಳಿಯ ಗಮನಕ್ಕೆ ತರತಕ್ಕದ್ದು. ಈ ವಿಳಾಸ ಬದಲಾವಣೆಯನ್ನು ಪರಿಗಣಿಸಲು ಮಂಡಳಿಯು ಪ್ರಯತ್ನಿಸುವುದು. ಆದಾಗ್ಯೂ ಈ ವಿಚಾರದಲ್ಲಿ ಮಂಡಳಿಯು ಯಾವುದೇ ಜವಾಬ್ದಾರಿಯನ್ನು ವಹಿಸಿಕೊಳ್ಳುವುದಿಲ್ಲ. ಈ ಬಗ್ಗೆ ಅಭ್ಯರ್ಥಿಗಳು ಎಚ್ಚರ ವಹಿಸತಕ್ಕದ್ದು.

ಅಭ್ಯರ್ಥಿಗಳು ಮಂಡಳಿಯೊಡನೆ ಸಂಪರ್ಕಿಸಬೇಕಾದ ಸಂದರ್ಭದಲ್ಲಿ ಅವರ ಮನವಿಯು ಕೆಳಕಂಡ ಮಾಹಿತಿಗಳನ್ನು ಒಳಗೊಂಡಿರಬೇಕು.:–

ಅ) ಅಭ್ಯರ್ಥಿಯ ಪೂರ್ಣ ಹೆಸರು (ಬಿಡಿ ಅಕ್ಷರಗಳಲ್ಲಿ)

ಆ) ಹುದ್ದೆಯ ಹೆಸರು

ಇ) ಅರ್ಜಿಯಲ್ಲಿ ನಮೂದಿಸಿರುವ ಅಂಚೆ ವಿಳಾಸ.

15) <u>ಇತರೆ ಸೂಚನೆಗಳು:</u>

1) ಅಭ್ಯರ್ಥಿಗಳು ಅರ್ಜಿ ಸಲ್ಲಿಸುವಾಗ ಅದನ್ನು ಮಡಚುವುದಾಗಲಿ, ಹರಿಯುವುದಾಗಲಿ ಮಾಡದೆ ಹಾಳಾಗದಂತೆ ಎಚ್ಚರ ವಹಿಸತಕ್ಕದ್ದು.
2) ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿ ಸಲ್ಲಿಸಿದ ಅರ್ಜಿಯ ಒಂದು ಛಾಯಾ (ಫೋಟೋ) ಪ್ರತಿಯನ್ನು ತಮ್ಮೊಂದಿಗೆ ಇಟ್ಟುಕೊಳ್ಳಲು ಸೂಚಿಸಿದೆ.

3) ಸೇವೆಯಲ್ಲಿರುವ ಅಭ್ಯರ್ಥಿಗಳು ಆಯ್ಕೆಪಟ್ಟಿಯಲ್ಲಿ ಸ್ಥಾನಪಡೆದಲ್ಲಿ ನೇಮಕಾತಿಗೂ ಮೊದಲು ಅವರುಗಳು ಕಾರ್ಯನಿರ್ವಹಿಸುತ್ತಿರುವ ನೇಮಕಾತಿ ಪ್ರಾಧಿಕಾರಗಳಿಂದ ನಿರಾಕ್ಷೇಪಣಾ ಪ್ರಮಾಣಪತ್ರವನ್ನು ಪಡೆದು ಸಲ್ಲಿಸತಕ್ಕದ್ದು.
4) ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೆಯ ಕೆಲಸದ ದಿನವು ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕವಾಗುವುದು.
5) ಅಭ್ಯರ್ಥಿಗಳು ನಿಗದಿತ ಕೊನೆಯ ದಿನಾಂಕದವರೆವಿಗೂ ಕಾಯದೆ ಮುಂಚಿತವಾಗಿ ಅರ್ಜಿ ಸಲ್ಲಿಸುವಂತೆ ಸೂಚಿಸಿದೆ.
6) ಲಕೋಟೆಯ ಮೇಲೆ ಹುದ್ದೆಯ ಹೆಸರನ್ನು ಕಡ್ಡಾಯವಾಗಿ ನಮೂದಿಸತಕ್ಕದು.

16) **<u>ದುರ್ನಡತೆ :</u>**

ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ಅವನ/ಅವಳ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅನುಸರಿಸಿರುವುದು ಕಂಡುಬಂದಲ್ಲಿ ಅವನು/ಅವಳು ಸ್ವತ: ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ, ಹುದ್ದೆಯ ಆಯ್ಕೆಯಿಂದ ಅಂತಹವರ ಅಭ್ಯರ್ಥಿತನವನ್ನು ರದ್ದುಪಡಿಸಲಾಗುವುದು.

17) **<u>ಆಯ್ಕೆ ವಿಧಾನ:</u>**

ಕರ್ನಾಟಕ ಆಡಳಿತ ನ್ಯಾಯಮಂಡಳಿ (ನೇಮಕಾತಿ) ನಿಯಮಗಳು, 1993 ಮತ್ತು ಅದರಡಿಯಲ್ಲಿ ಕಾಲ ಕಾಲಕ್ಕೆ ಮಾಡಲಾದ ತಿದ್ದುಪಡಿಯ ಪ್ರಕಾರ ಅಭ್ಯರ್ಥಿಯು ನಿಗದಿಪಡಿಸಿದ ಪರೀಕ್ಷೆಗಳಲ್ಲಿ ಪಡೆದ ಶೇಕಡ ಒಟ್ಟು ಅಂಕಗಳ ಸರಾಸರಿ ಆಧಾರದ ಮೇಲೆ ಮತ್ತು ಚಾಲ್ತಿಯಲ್ಲಿರುವ ಮೀಸಲಾತಿ ನಿಯಮಗಳನ್ವಯ ಆಯ್ಕೆ ಸಮಿತಿಯು ಅಭ್ಯರ್ಥಿಗಳನ್ನು ಆಯ್ಕೆ ಮಾಡಲಿದೆ. ತದನಂತರ ನೇಮಕಾತಿ ಪ್ರಾಧಿಕಾರವಾದ ಅಧ್ಯಕ್ಷರು, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ ಇವರು, ಆಯ್ಕೆಯಾದ ಅಭ್ಯರ್ಥಿಗಳು ಎಲ್ಲಾ ವಿಧದಿಂದಲೂ ನೇಮಕಾತಿಗೆ ಅರ್ಹರು ಎಂಬ ಬಗ್ಗೆ ತೃಪ್ತಿ ಹೊಂದಿದ ನಂತರ ಅವರನ್ನು ನೇಮಕಾತಿಗೆ ಪರಿಗಣಿಸಲಾಗುವುದು.

18) ಇತ್ತೀಚಿನ ಭಾವಚಿತ್ರ ಸಹಿತ ಭರ್ತಿ ಮಾಡಿದ ಅರ್ಜಿಗಳನ್ನು ವಿಲೇಖನಾಧಿಕಾರಿಗಳು, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, 7ನೇ ಮಹಡಿ, ಕೆ.ಜಿ.ರಸ್ತೆ, ಬೆಂಗಳೂರು–560009, (**Registrar, K.S.A.T., 7th Floor, Kandaya Bhavana, K.G.Road, Bengaluru-560009)** ಇವರಿಗೆ ರೂ.150–00 ಅಂಚೆ ಆದೇಶ/ಡಿಡಿಯ ಮೂಲಪ್ರತಿ ಹಾಗೂ ಮೀಸಲಾತಿ ಪ್ರಮಾಣ ಪತ್ರಗಳು, ವಿದ್ಯಾರ್ಹತೆಯ ಬಗೆಗಿನ ಅಂಕಪಟ್ಟಿ/ಪ್ರಮಾಣ ಪತ್ರಗಳ ಛಾಯಾ (ಜೆರಾಕ್ಸ್) ಪ್ರತಿಗಳೊಂದಿಗೆ **ದಿನಾಂಕ: 31.01.2023 ರ ಸಂಜೆ 5.30 ಗಂಟೆ** ಒಳಗಾಗಿ ಸಲ್ಲಿಸತಕ್ಕದ್ದು.

**ಅಧ್ಯಕ್ಷರು ಮತ್ತು ನೇಮಕಾತಿ ಪ್ರಾಧಿಕಾರದ ಆದೇಶದ ಮೇರೆಗೆ,**

ಸಹಿ/–
**(ಎಸ್.ಕೆ.ವಂಟಿಗೋಡಿ)**
ವಿಲೇಖನಾಧಿಕಾರಿ
ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ,
ಬೆಂಗಳೂರು.

## ಅನುಬಂಧ–1

**(ಪ.ಜಾ. /ಪ.ಪಂ. ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**

**ನಮೂನೆ – ಡಿ**

**(ಕರ್ನಾಟಕ ನಾಗರಿಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ**

**ನಿಯಮ 3ಎ (2)(3) ನ್ನು ನೋಡಿ)**

**ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳಿಗೆ ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರಗಳ ನಮೂನೆ.**

**ಪ್ರಮಾಣ ಪತ್ರ**

------------- ರಾಜ್ಯದ / ಕೇಂದ್ರಾಡಳಿತ ಪ್ರದೇಶದ * ------------ ಜಿಲ್ಲೆಯ / ವಿಭಾಗದ ------------------- ಗ್ರಾಮ/ಪಟ್ಟಣದ * ನಿವಾಸಿಯಾದ ಶ್ರೀ / ಶ್ರೀಮತಿ -------------ಎಂಬುವವರ ಮಗ/ಮಗಳಾದ ಶ್ರೀ/ ಶ್ರೀಮತಿ --------------- ಇವರು ಅನುಸೂಚಿತ ಜಾತಿ/ಅನುಸೂಚಿತ ಬುಡಕಟ್ಟು * ಎಂದು ಮಾನ್ಯ ಮಾಡಲಾಗಿರುವ ಜಾತಿ/ಬುಡಕಟ್ಟಿಗೆ * ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

- ಸಂವಿಧಾನ (ಅನುಸೂಚಿತ ಜಾತಿಗಳು) ಆದೇಶ, 1950
- ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) ಆದೇಶ, 1950
- ಸಂವಿಧಾನ (ಅನುಸೂಚಿತ ಜಾತಿ)(ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1950
- ಸಂವಿಧಾನ (ಅನುಸೂಚಿತ ಬುಡಕಟ್ಟುಗಳು)(ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1951 (ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಪಟ್ಟಿ (ಮಾರ್ಪಾಡು) ಆದೇಶ 1956, ಮುಂಬಯಿ ರಾಜ್ಯ ಪುನರ್ ರಚನಾ ಅಧಿನಿಯಮ, 1960, ಪಂಜಾಬ್ ರಾಜ್ಯ ಪುನರ್ ರಚನಾ ಅಧಿನಿಯಮ, 1966, ಹಿಮಾಚಲ ರಾಜ್ಯ ಅಧಿನಿಯಮ 1970 ಮತ್ತು ಈಶಾನ್ಯ ಪ್ರದೇಶಗಳ (ಪುನರ್ ರಚನಾ ಅಧಿನಿಯಮ, 1971ರ ಮೂಲಕ ತಿದ್ದುಪಡಿಯಾದಂತೆ).
- ಸಂವಿಧಾನ (ಜಮ್ಮು ಮತ್ತು ಕಾಶ್ಮೀರ) ಅನುಸೂಚಿತ ಜಾತಿಗಳ ಆದೇಶ, 1956
- ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ (ತಿದ್ದುಪಡಿ) ಅಧಿನಿಯಮ, 1976ರ ಮೂಲಕ ತಿದ್ದುಪಡಿಯಾದಂತೆ ಸಂವಿಧಾನ (ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳ) ಅನುಸೂಚಿತ ಬುಡಕಟ್ಟುಗಳ ಆದೇಶ, 1959.
- ಸಂವಿಧಾನ (ದಾದರ್ ಮತ್ತು ನಗರ ಹವೇಲಿ) ಅನುಸೂಚಿತ ಜಾತಿಗಳ ಆದೇಶ, 1962
- ಸಂವಿಧಾನ (ಪಾಂಡಿಚೇರಿ) ಅನುಸೂಚಿತ ಜಾತಿಗಳ ಆದೇಶ, 1964
- ಸಂವಿಧಾನ (ಅನುಸೂಚಿತ ಬುಡಕಟ್ಟುಗಳ) (ಉತ್ತರ ಪ್ರದೇಶ) ಆದೇಶ, 1967
- ಸಂವಿಧಾನ (ಗೋವಾ, ದಮನ್ ಮತ್ತು ದೀವ್) ಅನುಸೂಚಿತ ಜಾತಿಬುಡಕಟ್ಟುಗಳ ಆದೇಶ, 1988
- ಸಂವಿಧಾನ (ನಾಗಾಲ್ಯಾಂಡ್) ಅನುಸೂಚಿತ ಬುಡಕಟ್ಟುಗಳ ಆದೇಶ.

ಶ್ರೀ / ಶ್ರೀಮತಿ/ಕುಮಾರಿ * ----------------- ಮತ್ತು / ಅಥವಾ ಅವನ */ಅವಳ * ಕುಟುಂಬವು --------- ರಾಜ್ಯ/ ಕೇಂದ್ರಾಡಳಿತ ಪ್ರದೇಶದ ------------ ಜಿಲ್ಲಾ / ವಿಭಾಗದ * ---------- ಗ್ರಾಮ / ಪಟ್ಟಣದ ಸಾಮಾನ್ಯ ನಿವಾಸಿ (ಗಳು).

ಸಹಿ:---------

ತಹಸೀಲ್ದಾರರು-----------

ಸ್ಥಳ :

ದಿನಾಂಕ: ಪದನಾಮ ಕಛೇರಿಯ ಮೊಹರಿನೊಂದಿಗೆ

ರಾಜ್ಯ / ಕೇಂದ್ರಾಡಳಿತ ಪ್ರದೇಶ *

* ಅನ್ವಯವಾಗದಿರುವ ಪದಗಳನ್ನು ದಯವಿಟ್ಟು ಬಿಟ್ಟುಬಿಡಿ/ ಹೊಡೆದು ಹಾಕಿ.

**ಸೂಚನೆ**: ಇಲ್ಲಿ ಉಪಯೋಗಿಸಿದ ''ಸಾಮಾನ್ಯ ನಿವಾಸಿಗಳು'' ಎಂಬ ಪದಾವಳಿಯು ಪ್ರಜಾ ಪ್ರಾತಿನಿಧ್ಯ ಅಧಿನಿಮಯ, 1950ರ 20ನೇ ಪ್ರಕರಣದಲ್ಲಿರುವ ಅರ್ಥವನ್ನೇ ಹೊಂದಿರುತ್ತದೆ.

ಭಾರತ ಸರ್ಕಾರದ ಪತ್ರ ಸಂಖ್ಯೆ: ಬಿಸಿ 12028/2/78 ಎಸ್ ಸಿ ಟಿ –1 ಗೃಹಮಂತ್ರಾಲಯದ ಅನುಸಾರವಾಗಿ, ಅಂಥ ಪ್ರಮಾಣ ಪತ್ರಗಳನ್ನು ನೀಡಲು ಸಕ್ಷಮವಾಗಿರುವುದಕ್ಕಾಗಿ, ಭಾರತ ಸರ್ಕಾರದ (ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ) ಪತ್ರ ಸಂಖ್ಯೆ: 13–2–74 ಇಎಸ್‌ಟಿ (ಎಸ್‌ಸಿಟಿ) ದಿನಾಂಕ 5ನೇ ಆಗಸ್ಟ್ 1975ರಲ್ಲಿ ನಮೂದಿಸಿದ ಪ್ರಾಧಿಕಾರಿಯು, ರಾಷ್ಟ್ರಪತಿಗಳು ಸಂಬಂಧಪಟ್ಟ ಅದೇಶದ ಅಧಿಸೂಚನೆಯನ್ನು ಹೊರಡಿಸಿದ ಸಮಯದಲ್ಲಿ ಪ್ರಮಾಣ ಪತ್ರಕ್ಕಾಗಿ ಅರ್ಜಿ ಸಲ್ಲಿಸಿದ ವ್ಯಕ್ತಿಯು, ತನ್ನ ಖಾಯಂ ವಾಸ ಸ್ಥಳವನ್ನು ಹೊಂದಿದ್ದ ಸ್ಥಳಕ್ಕೆ ಸೇರಿದವರೊಬ್ಬರಾಗಿರತಕ್ಕದ್ದು. ಅದೇ ರೀತಿಯಲ್ಲಿ, ಒಂದು ತಾಲ್ಲೂಕಿನ ರೆವಿನ್ಯೂ ಪ್ರಾಧಿಕಾರಿಯು ಇನ್ನೊಂದು ತಾಲ್ಲೂಕಿಗೆ ಸೇರಿದ ವ್ಯಕ್ತಿಗಳಿಗೆ ಸಂಬಂಧಪಟ್ಟ ಪ್ರಮಾಣ ಪತ್ರವನ್ನು ನೀಡಲು ಸಕ್ಷಮ ಪ್ರಾಧಿಕಾರಿಯಾಗಿರುವುದಿಲ್ಲ.

**(ಪ್ರವರ್ಗ–1 ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**

**ನಮೂನೆ – ಇ**

**(ಕರ್ನಾಟಕ ನಾಗರಿಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ 3ಎ (2)(3) ನ್ನು ನೋಡಿ)**

ಹಿಂದುಳಿದ ವರ್ಗಗಳಿಗೆ (ಪ್ರವರ್ಗ–1) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರ

-------------------------------------------- ಗ್ರಾಮ / ಪಟ್ಟಣ / ನಗರದ ನಿವಾಸಿಯಾದ ಶ್ರೀ / ಶ್ರೀಮತಿ ---------------------------------------- ಇವರ ಮಗ / ಮಗಳು / ಪತಿ / ಪತ್ನಿಯಾದ ಶ್ರೀ / ಶ್ರೀಮತಿ --------------------------------------------- – ಇವರು ಹಿಂದುಳಿದ ವರ್ಗಗಳ (ಪ್ರವರ್ಗ–1) ----------------------------------ಜಾತಿಯ ---------------------------- ಉಪಜಾತಿಗೆ ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ತಹಸೀಲ್ದಾರರು

ಸ್ಥಳ :

ದಿನಾಂಕ

---------- ತಾಲ್ಲೂಕು

ಕಛೇರಿಯ ಮೊಹರು.

**(ಪ್ರವರ್ಗ–2ಎ, 2ಬಿ, 3ಎ, 3ಬಿ ಗೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**

**ನಮೂನೆ–ಎಫ್**

**(ಕರ್ನಾಟಕ ನಾಗರಿಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ**

**ನಿಯಮ 3ಎ (2)(3) ನ್ನು ನೋಡಿ)**

ಪ್ರವರ್ಗ–1ರ ಹೊರತಾಗಿ, ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳಿಗೆ ನೀಡುವ ಆದಾಯ ಮತ್ತು ಜಾತಿ ಪ್ರಮಾಣ ಪತ್ರ ________ ರಲ್ಲಿ ವಾಸವಾಗಿರುವ ಶ್ರೀ / ಶ್ರೀಮತಿ _________________.. ಇವರ ಮಗ / ಮಗಳು / ಪತಿ / ಪತ್ನಿಯಾದ, ಶ್ರೀ / ಶ್ರೀಮತಿ / ಕುಮಾರಿ __________________. ಇವರು ಮತ್ತು ಆತನ / ಅವಳ ತಂದೆ ತಾಯಿ / ಪೋಷಕರು / ಪತ್ನಿ / ಪತಿಯು, ಸರ್ಕಾರಿ ಆದೇಶಗಳ ಸಂಖ್ಯೆ / ಎಸ್ ಡಬ್ಲ್ಯೂಡಿ 225 ಬಿಸಿಎ 2000 ದಿನಾಂಕ: 30–03–2002 ರಲ್ಲಿ ನಿರ್ದಿಷ್ಟಪಡಿಸಿದ ಮೇಲುಸ್ತರದ (ಕ್ರೀಮಿ ಲೇಯರ್) ವ್ಯಾಪ್ತಿಯಲ್ಲಿ ಬರುವುದಿಲ್ಲವೆಂದು :

ಅಭ್ಯರ್ಥಿಯಾಗಲಿ ಅಥವಾ ಆತನ / ಆಕೆಯ ತಂದೆ ತಾಯಿ / ಪೋಷಕರಾಗಲಿ / ಪತ್ನಿ / ಪತಿಯಾಗಲಿ, ಸರ್ಕಾರದ ಸೇವೆಯಲ್ಲಿ 1ನೇ ದರ್ಜೆಯ ಅಥವಾ 2ನೇ ದರ್ಜೆಯ ಅಧಿಕಾರಿ–ಯಾಗಿಲ್ಲವೆಂದು:

ಅಥವಾ

ಸಾರ್ವಜನಿಕ ವಲಯ ಉದ್ಯಮದಲ್ಲಿ ತತ್ಸಮಾನದ ಹುದ್ದೆಯನ್ನು ಹೊಂದಿರುವುದಿಲ್ಲ.

ಅಥವಾ

ಖಾಸಗಿ ನಿಯೋಜಕರ ಕೈ ಕೆಳಗೆ, 2ನೇ ದರ್ಜೆಯ ಅಧಿಕಾರಿಯ ಸಂಬಳಕ್ಕಿಂತ (ವೇತನ ಶ್ರೇಣಿ ರೂ.6000/– – 12000/– ಪ್ರಾರಂಭಿಕ ಹಂತ) ಕಡಿಮೆಯಿಲ್ಲದ ಸಂಬಳವನ್ನು ಪಡೆಯುವ ನೌಕರನಾಗಿಲ್ಲವೆಂದು:

ಅಥವಾ

ಆತನ/ಆಕೆಯ ತಂದೆ ತಾಯಿ / ಪೋಷಕರು/ಪತ್ನಿ/ಪತಿಯ ಆದಾಯವೂ ಎರಡು ಲಕ್ಷ ಮೀರಿರುವುದಿಲ್ಲವೆಂದು:

ಅಥವಾ

ಕರ್ನಾಟಕ ಭೂ ಸುಧಾರಣಾ ಅಧಿನಿಯಮ 1961 ರಲ್ಲಿ ನಿಗದಿಪಡಿಸಿರುವಂತೆ ಆತನ/ಆಕೆಯ ತಂದೆ ತಾಯಿ / ಪೋಷಕರು / ಪತ್ನಿ / ಪತಿಯು ಮಾರಾಟ ತೆರಿಗೆದಾರನಲ್ಲ ಅಥವಾ ಆತನ / ಆಕೆಯ ತಂದೆ ತಾಯಿ / ಪೋಷಕ / ಪತ್ನಿ / ಪತಿಯು ಅಥವಾ ಇವರಿಬ್ಬರೂ 10 ಯೂನಿಟ್‌ಗಿಂತ ಹೆಚ್ಚಿನ ಕೃಷಿ ಭೂಮಿ ಅಥವಾ 25 ಎಕರೆಗಳಿಗಿಂತ ಹೆಚ್ಚಿನ ಪ್ಲಾಂಟೇಷನ್ ಭೂಮಿಯನ್ನು ಹೊಂದಿರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ. ಸರ್ಕಾರಿ ಆದೇಶ ಸಂಖ್ಯೆ ಎಸ್‌ಡಬ್ಲ್ಯೂಡಿ 225 ಬಿಸಿಎ 2000 ದಿನಾಂಕ: 30–03–2002ರ ಅನ್ವಯ ಶ್ರೀ / ಶ್ರೀಮತಿ / ಕುಮಾರಿ ________________________ ಇವರು ____________________ ಜಾತಿಗೆ ________________________ ಸೇರಿದ ಉಪಜಾತಿಯವರಾಗಿದ್ದು, ಸರ್ಕಾರಿ ಆದೇಶ ಸಂಖ್ಯೆ ಎಸ್‌ಡಬ್ಲ್ಯೂಡಿ 225 ಬಿಸಿಎ 2000 ದಿನಾಂಕ: 30–03–2002ರ ಅನ್ವಯ ಹಿಂದುಳಿದ ವರ್ಗಗಳ ಪ್ರವರ್ಗ __________________.. (2ಎ, 2ಬಿ, 3ಎ, 3ಬಿ) ಸೇರಿರುತ್ತಾರೆ.

ಸ್ಥಳ: ತಹಸೀಲ್ದಾರರು

ದಿನಾಂಕ: ____ ತಾಲ್ಲೂಕು,

ಕಛೇರಿಯ ಮೊಹರು.

ಸೂಚನೆ 1) ಸರ್ಕಾರದ ಆದೇಶ ಸಂಖ್ಯೆ: ಹಿಂವಕ 304 ಬಿಸಿಎ 2017, ದಿನಾಂಕ: 14–09–2018ರಂತೆ ಹಿಂದುಳಿದ ವರ್ಗಗಳ ಪ್ರವರ್ಗ–2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಗಳಿಗೆ ಅನ್ವಯಿಸುವಂತೆ ಕೆನೆಪದರಕ್ಕೆ ನಿಗದಿಪಡಿಸಿರುವ ಅಭ್ಯರ್ಥಿಯ ಮತ್ತು ಅವರ ತಂದೆ–ತಾಯಿ, ಪೋಷಕರ ವಾರ್ಷಿಕ ಒಟ್ಟು ಆದಾಯ ಮಿತಿಯನ್ನು (Gross Annual Income) 6.00 ಲಕ್ಷಗಳಿಂದ 8.00 ಲಕ್ಷಗಳಿಗೆ ಹೆಚ್ಚಿಸಲಾಗಿದೆ. ಆದುದರಿಂದ, ಮೀಸಲಾತಿ ಪ್ರಮಾಣ ಪತ್ರವನ್ನು ನೀಡುವ ಅಧಿಕೃತ ಅಧಿಕಾರಿಯು ದಿನಾಂಕ:14–09–2018ರ ಸರ್ಕಾರಿ ಆದೇಶದಲ್ಲಿನ ಅಂಶಗಳನ್ನು ವಿವರವಾಗಿ ಖಚಿತಪಡಿಸಿಕೊಂಡ ನಂತರವೇ ನೀಡತಕ್ಕದ್ದು.

2) ಈ ಮೇಲೆ ಹೇಳಲಾದ ಸರ್ಕಾರಿ ಆದೇಶದಲ್ಲಿನ ಅಂಶಗಳನ್ನು ಗಮನದಲ್ಲಿಟ್ಟುಕೊಂಡೇ ಸದರಿ ಮೀಸಲಾತಿಗಳನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು ಅದರಂತೆ ಜಾತಿ/ಮೀಸಲಾತಿ ಪ್ರಮಾಣ ಪತ್ರಗಳನ್ನು ಮಾಡಿಸಲು ಸೂಚಿಸಿದೆ.

## ನಮೂನೆ–1

# ಜನರಲ್ ಮೆರಿಟ್ ಅಭ್ಯರ್ಥಿಗಳು ಮೇಲು ಸ್ತರಕೆ ಸೇರಿಲ್ಲವೆಂದು ದೃಢೀಕರಿಸಿ ಗ್ರಾಮೀಣ ಮೀಸಲಾತಿಯನ್ನು ಕೋರಲು ಸಲ್ಲಿಸಬೇಕಾದ ಪ್ರಮಾಣ ಪತ್ರ

### ಜನರಲ್ ಮೆರಿಟ್ ಅಭ್ಯರ್ಥಿಗಳು ಭರ್ತಿ ಮಾಡಬೇಕಾದ ನಮೂನೆ

ಇವರಿಗೆ:

ತಹಶೀಲ್ದಾರರು,

————————————ತಾಲ್ಲೂಕು

———————————— ಜಿಲ್ಲೆ.

ಮಾನ್ಯರೆ,

ಶ್ರೀ/ ಶ್ರೀಮತಿ —————————————————————— ಎಂಬುವವರ ಮಗ/ಮಗಳು/ಪತಿ/ಪತ್ನಿ ————————————————————————— ಆದ ನಾನು ಮೇಲುಸ್ತರದಲ್ಲಿ (Creamy Layer) ಬರುವುದಿಲ್ಲವೆಂದು ನೇರ ನೇಮಕಾತಿಯಲ್ಲಿ ಗ್ರಾಮೀಣ ಅಭ್ಯರ್ಥಿ ಮೀಸಲಾತಿಯನ್ನು ಪಡೆಯುವುದಕ್ಕಾಗಿ ಪ್ರಮಾಣ ಪತ್ರವನ್ನು ಪಡೆಯಲು ತಮ್ಮಲ್ಲಿ ಈ ಕೆಳಕಂಡ ಮಾಹಿತಿಗಳನ್ನು ಒದಗಿಸುತ್ತಾ ಕೋರುತ್ತೇನೆ.

1. ಅಭ್ಯರ್ಥಿಯ ಹೆಸರು ಮತ್ತು ಉದ್ಯೋಗ :
2. ಆಭ್ಯರ್ಥಿಯ ಸ್ವಂತ ಸ್ಥಳ ಗ್ರಾಮ :

   ತಾಲ್ಲೂಕು :

   ಜಿಲ್ಲೆ :

3. ಆಭ್ಯರ್ಥಿಯು ಹುಟ್ಟಿದ ದಿನಾಂಕ, ವಯಸ್ಸು ಮತ್ತು ಹುಟ್ಟದ ಸ್ಥಳ:
4. ಅಭ್ಯರ್ಥಿಯ ತಂದೆ/ತಾಯಿ/ಪೋಷಕರ ಪತಿಯ/ಪತ್ನಿಯ ಹೆಸರು ಮತ್ತು ಉದ್ಯೋಗ:
   (ಉದ್ಯೋಗವು ಸರ್ಕಾರಿ/ಅರೆ ಸರ್ಕಾರಿ/ಸಾರ್ವಜನಿಕ ಉದ್ಯಮ/ಖಾಸಗಿ)
5. ಅಭ್ಯರ್ಥಿಯ ಪ್ರಸ್ತುತ ವಿಳಾಸ:
   (ಸ್ಪಷ್ಟವಾಗಿ ನಮೂದಿಸುವುದು)
6. ಅಭ್ಯರ್ಥಿಯ ಖಾಯಂ ವಿಳಾಸ:
7. ಅಭ್ಯರ್ಥಿಯ ಶಾಲಾ ಶಿಕ್ಷಣದ ವ್ಯಾಸಂಗ ಮಾಡಿದ ಶಾಲೆಗಳ ವಿವರ:
   ಪ್ರಾಥಮಿಕ:

   ಮಾಧ್ಯಮಿಕ:

   ಪ್ರೌಢ

8. ಅಭ್ಯರ್ಥಿಯ ಹಾಗೂ ಅಭ್ಯರ್ಥಿಯ ತಂದೆ/ತಾಯಿ/ಪೋಷಕರ (ತಂದೆ/ತಾಯಿ ಜೀವಂತವಿಲ್ಲದಿದ್ದರೆ) ಇವರ ಒಟ್ಟು ವಾರ್ಷಿಕ ಆದಾಯ ಎಲ್ಲಾ ಮೂಲಗಳಿಂದ:
   1) ವೇತನ ಶ್ರೇಣಿ
   2) ಜಮೀನಿನ ವಿವರ
   3) ಇತರ ಮೂಲಗಳು
9. ಆದಾಯ ತೆರಿಗೆ ಪಾವತಿದಾರರೇ?
10. ಸಂಪತ್ತು ತೆರಿಗೆ ಪಾವತಿದಾರರೇ?
11. ಮಾರಾಟ ತೆರಿಗೆ ಪಾವತಿದಾರರೇ?

## ಪ್ರಮಾಣೀಕೃತ ಘೋಷಣೆ

ಈ ಮೇಲೆ ನನ್ನಿಂದ ಒದಗಿಸಿದ ಮಾಹಿತಿ/ವಿವರಣೆಯು ನಾನು ತಿಳಿದಿರುವಷ್ಟರ ಮಟ್ಟಿಗೆ ಸತ್ಯವೆಂದು ಶ್ರದ್ಧಾಪೂರ್ವಕವಾಗಿ ದೃಢೀಕರಿಸುತ್ತೇನೆ ಮತ್ತು ಘೋಷಿಸುತ್ತೇನೆ.

ಸ್ಥಳ: ತಮ್ಮ ವಿಧೇಯ

ದಿನಾಂಕ: (ಅಭ್ಯರ್ಥಿಯ ಸಹಿ)

ಮೇಲೆ ಒದತಿಸಲಾದ ಮಾಹಿತಿಗಳು ಸತ್ಯವಾಗಿರುತ್ತದೆ ಎಂದು ಪ್ರಮಾಣೀಕರಿಸುತ್ತಾ, ಈ ಮಾಹಿತಿಗಳು ಅಸತ್ಯವೆಂದು ದೃಢಪಟ್ಟಲ್ಲಿ ಅಪರಾಧ ವಿಚಾರಣೆಗೆ ಬದ್ಧನಾಗಿರುತ್ತೇನೆ.

ಸ್ಥಳ: ತಂದೆ/ತಾಯಿ/ಪೋಷಕರ ಸಹಿ

ಬೆಂಗಳೂರು: (ತಂದೆ/ತಾಯಿ ಜೀವಂತವಿಲ್ಲದಿದ್ದರೆ)

(ಹೆಂಡತಿ/ಗಂಡ/ಇವರ ಸಹಿ)

## ಸ್ಥಳೀಯ ಇಬ್ಬರು ಸಾಕ್ಷಿದಾರರು

ಅಭ್ಯರ್ಥಿಯ ಮತ್ತು ಅವರ ತಂದೆ/ತಾಯಿ/ಪೋಷಕರು/ಪತಿ/ಪತ್ನಿ ಇವರನ್ನು ಹಾಗೂ ಇವರ ಸಹಿಯನ್ನು ಗುರುತಿಸುತ್ತೇವೆ.

ಸಾಕ್ಷಿದಾರರ ಸಹಿ: 1)

(ಪೂರ್ಣ ವಿಳಾಸದೊಂದಿಗೆ) 2)

<u>ಪರಿಶೀಲನಾ ಪ್ರಮಾಣ ಪತ್ರ</u>

1. ಶ್ರೀ/ ಶ್ರೀಮತಿ ____________________________ಎಂಬುವವರ ಮಗ/ಮಗಳು/ ಪತಿ/ ಪತ್ನಿ ಶ್ರೀ/ಶ್ರೀಮತಿ/ಕುಮಾರಿ____________________________ಎಂಬುವವರು ಕರ್ನಾಟಕ ರಾಜ್ಯದ – ________ ಜಿಲ್ಲೆಯ ವಿಭಾಗ ___________________ ಗ್ರಾಮ/ಪಟ್ಟಣ/ನಗರದಲ್ಲಿ ಸಾಮಾನ್ಯ ನಿವಾಸಿಯಾಗಿದ್ದಾರೆ ಮತ್ತು ಇವರು ಜನರಲ್ ಮೆರಿಟ್ ವರ್ಗಕ್ಕೆ ಸೇರಿದವರಾಗಿರುತ್ತಾರೆ.

2. ಶ್ರೀ/ ಶ್ರೀಮತಿ ______________________ ಇವರ ತಂದೆ/ತಾಯಿ/ಪೋಷಕರು ಸರ್ಕಾರಿ ಆದೇಶ ಸಂಖ್ಯೆ: ಎಸ್ ಡಬ್ಲ್ಯೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ; 31.01.1995 ಅನ್ವಯ ಜನರಲ್ ಮೆರಿಟ್ ವರ್ಗದ ಮೇಲುಸ್ತರದಲ್ಲಿ (Creamy Layer) ಬರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ.

ದಿನಾಂಕ: ತಹಶೀಲ್ದಾರ್,

ಸ್ಥಳ: ______ ತಾಲ್ಲೂಕು

ಕಛೇರಿಯ ಮೊಹರು

ನಮೂನೆ–2

<u>ಗ್ರಾಮೀಣ ಅಭ್ಯರ್ಥಿ ಪ್ರಮಾಣ ಪತ್ರ</u>

ಶ್ರೀ/ಶ್ರೀಮತಿ________________________________ರವರ ಮಗ/ಮಗಳು/ಪತ್ನಿ/ಶ್ರೀ/ ಶ್ರೀಮತಿ/ಕುಮಾರಿ___________________________ಜಿಲ್ಲೆ_________________________ ತಾಲ್ಲೂಕು___________________ಗ್ರಾಮದಲ್ಲಿ ______________ ವಾಸವಾಗಿರುವ ಇವರು ಒಂದನೇ ತರಗತಿಯಿಂದ ________________ ತರಗತಿಯವರೆಗೆ ____________ ಜಿಲ್ಲೆ _________ ತಾಲ್ಲೂಕು_________________ಪಟ್ಟಣ _______________ ಶಾಲೆಯಲ್ಲಿ ವ್ಯಾಸಂಗ ಮಾಡಿ _______________ ವರ್ಷ ನಡೆದ ಪರೀಕ್ಷೆಯಲ್ಲಿ ಉತೀರ್ಣರಾಗಿರುತ್ತಾರೆ. ಈ ಶಾಲೆಯು ಅಭ್ಯರ್ಥಿಯು ವ್ಯಾಸಂಗ ಮಾಡಿದ ಅವಧಿಯಲ್ಲಿ ಕರ್ನಾಟಕ ಪೌರ ನಿಗಮಗಳ ಅಧಿನಿಯಮ, 1976 ಅಥವಾ ಕರ್ನಾಟಕ ಪೌರ ಸಭೆಗಳ ಅಧಿನಿಯಮ 1964ರ ಅಡಿಯಲ್ಲಿ ನಿರ್ದಿಷ್ಟಪಡಿಸಿ ಒಂದು ದೊಡ್ಡ ನಗರ ಪ್ರದೇಶ ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನೆ ಹಂತದಲ್ಲಿರುವ ಪ್ರದೇಶಗಳ ಹೊರತಾದ ಪ್ರದೇಶದಲ್ಲಿತ್ತು.

ಮೇಲು ರುಜು  
ಕ್ಷೇತ್ರ ಶಿಕ್ಷಣ ಅಧಿಕಾರಿ  
ಕಛೇರಿಯ ಮೊಹರು

ಸಹಿ:  
ಮುಖ್ಯೋಪಾಧ್ಯಾಯರ ಸಹಿ  
ಮತ್ತು ಸಂಸ್ಥೆಯ ಮೊಹರು